ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 23ನೇ ಡಿಸೆಂಬರ್, 2022
(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಮಹಾನಗರ ಪಾಲಿಕೆಗಳಲ್ಲಿ ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆ (ಹಂತ-III)ರ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿಯನ್ನು ಸಭೆಯ ಮುಂದಿಡುವುದು.

3. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:-

ಅ) 2022ನೇ ಸಾಲಿನ ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ ಹಾಗೂ ಇತರರು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವುದಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

.. 2/ ..

2) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ರಾಜ್ಯಾದ್ಯಂತ ಅತಿವೃಷ್ಟಿ, ಅನಾವೃಷ್ಟಿ, ಹವಾಮಾನ ವೈಪರಿತ್ಯಗಳಿಂದಾಗಿ, ಕಳಪೆ ಬೀಜ, ಕಳಪೆ ಗೊಬ್ಬರ, ನಿಷೇದಿತ ಕೀಟ ನಾಶಕಗಳ ಮಾರಾಟ, ಮಾರುಕಟ್ಟೆಯಲ್ಲಿ ಬೆಳೆಗಳ ದರ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಎ.ಟಿ. ರಾಮಸ್ವಾಮಿ, ಎಂ. ಕೃಷ್ಣಾರೆಡ್ಡಿ, ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿರುವ ರೈತರುಗಳಿಗೆ ಒದಗಿಸುವ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕೇಂದ್ರ ಸರ್ಕಾರವು ನೀಡಿರುವ ಸಬ್ಸಿಡಿ ಸೌಲಭ್ಯವನ್ನು ಪಡೆಯುವಲ್ಲಿ ರಾಜ್ಯ ಸರ್ಕಾರವು ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಸಾ.ರಾ. ಮಹೇಶ್ ಅವರು** – ರಾಜ್ಯದಲ್ಲಿ ಇತ್ತೀಚೆಗೆ ವಕೀಲರುಗಳ ಮೇಲೆ ಹಲ್ಲೆ, ದೌರ್ಜನ್ಯ ಹೆಚ್ಚಾಗಿದ್ದು ಕಕ್ಷಿದಾರರು ಹಾಗೂ ಎದುರು ಕಕ್ಷಿದಾರರಿಂದ ತೊಂದರೆಯಾಗುತ್ತಿದ್ದರೂ ವಕೀಲರ ಸಂಘದ ವತಿಯಿಂದ ಯಾವುದೇ ಪ್ರತಿಭಟನೆ ಹಮ್ಮಿಕೊಳ್ಳಲು ಮತ್ತು ಸದರಿ ವ್ಯಕ್ತಿಗಳ ವಿರುದ್ಧ ವಕಾಲತ್ತು ವಹಿಸದಿರಲು ಸಾಧ್ಯವಾಗದಂತಹ ಪರಿಸ್ಥಿತಿಯಿಂದಾಗಿ ವಕೀಲರು ಸಂಕಷ್ಟದಲ್ಲಿರುವುದರಿಂದ ರಾಜ್ಯದಲ್ಲಿ ವಕೀಲರ ಸಂರಕ್ಷಣೆ ಕಾಯ್ದೆಯನ್ನು ಜಾರಿಗೆ ತರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

2) **ಡಾ: ಜಿ. ಪರಮೇಶ್ವರ ಅವರು** – ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾ ಪಂಚಾಯಿತಿಯ ಮುಖಾಂತರ ನಿರ್ವಹಣೆ ಮಾಡುತ್ತಿರುವ ಕೆರೆಗಳು ಅತಿವೃಷ್ಟಿಯಿಂದಾಗಿ ತುಂಬುತ್ತಿದ್ದು, ನೀರನ್ನು ದೀರ್ಘ ಕಾಲದವರೆಗೆ ಹಿಡಿದಿಟ್ಟುಕೊಳ್ಳಲು ಹಾಗೂ ಅವುಗಳ ರಚನೆಯು ಹಾಳಾಗದಂತೆ ತಡೆದು ಕಾಲಕಾಲಕ್ಕೆ ಸಮರ್ಪಕವಾಗಿ ನಿರ್ವಹಣೆ ಮಾಡಲು ಸಮಗ್ರ ಯೋಜನೆಯನ್ನು ತುರ್ತಾಗಿ ರೂಪಿಸುವ ಬಗ್ಗೆ ಮತ್ತು ಅಗತ್ಯ ಅನುದಾನ ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ ಅವರುಗಳು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಿರುವ ಅಂಜನಾಪುರ ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳಿಲ್ಲದ ಕಾರಣ ನಾಗರಿಕರು ಮನೆ ನಿರ್ಮಿಸಿಕೊಳ್ಳಲು ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ಕೇಂದ್ರೀಯ ವಿವಿಧ ಅರೆ ಸೇನಾಪಡೆಗಳಲ್ಲಿ ಸೇವೆ ಸಲ್ಲಿಸುವ ರಾಜ್ಯದ ಯೋಧರು ಹಾಗೂ ನಿವೃತ್ತ ಮಾಜಿ ಯೋಧರು ಹಾಗೂ ಹುತಾತ್ಮ ಕುಟುಂಬಗಳ ಕ್ಷೇಮಾಭಿವೃದ್ಧಿಗಾಗಿ ರಾಜ್ಯದಲ್ಲಿ ಅರೆಸೈನಿಕ ಕಲ್ಯಾಣ ಮಂಡಳಿಯನ್ನು ಸ್ಥಾಪಿಸಿ, ಸಂವಿಧಾನಿಕ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

.. 3/ ..

5) **ಶ್ರೀ ಟಿ. ವೆಂಕಟರಮಣಯ್ಯ ಅವರು** – ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕಿನ ವಿವಿಧ ವಾರ್ಡ್‌ಗಳಲ್ಲಿ ಒಳಚರಂಡಿ ತ್ಯಾಜ್ಯ ನೀರು ವೈಜ್ಞಾನಿಕವಾಗಿ ಸಂಸ್ಕರಣೆಗೊಳ್ಳದೆ ಕೆರೆಗಳಲ್ಲಿ ಹರಿಯುತ್ತಿರುವುದರಿಂದ ಅಂತರ್ಜಲ ಹಾಗೂ ಪರಿಸರ ಕಲುಷಿತಗೊಂಡು ಜನ-ಜಾನುವಾರುಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಆಗುತ್ತಿರುವುದರಿಂದ ನಗರಸಭೆಯ ಒಳಚರಂಡಿ ತ್ಯಾಜ್ಯ ನೀರನ್ನು ಸಂಸ್ಕರಣೆ ಮಾಡುವ ಬಗ್ಗೆ ಹಾಗೂ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಳಚರಂಡಿ ತ್ಯಾಜ್ಯ ನೀರು ಸಂಸ್ಕರಣಾ ಘಟಕ ಸ್ಥಾಪಿಸುವುದರ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

6) **ಶ್ರೀ ಹೆಚ್. ಹಾಲಪ್ಪ ಹರತಾಳು** – ಸಾಗರ ತಾಲ್ಲೂಕಿನಲ್ಲಿ ವಿವಿಧ ಆಸ್ಪತ್ರೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಡಿ ಗ್ರೂಪ್ ನೌಕರರು ಮತ್ತು ವಾಹನ ಚಾಲಕರಿಗೆ ಪ್ರತಿ ತಿಂಗಳು ಮೊದಲ ವಾರದಲ್ಲಿಯೇ ವೇತನವನ್ನು ನೀಡದೇ ಮತ್ತು ಇಎಸ್‌ಐ/ಇಪಿಎಫ್ ಕೂಡ ತಡೆಹಿಡಿದಿರುವುದರಿಂದ ಸದರಿ ನೌಕರರ ಜೀವನ ನಿರ್ವಹಣೆ ಕಷ್ಟಕರವಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಡಿ.ಸಿ. ತಮ್ಮಣ್ಣ ಅವರು** – ಭಾರಿ ಮಳೆಯಿಂದ ಹಾಳಾಗಿರುವ ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಸೂಳೆಕೆರೆ ಮತ್ತು ಮದ್ದೂರು ಕೆರೆಗಳ ನಾಲೆಗಳನ್ನು ದುರಸ್ತಿಗೊಳಿಸಲು ಹಾಗೂ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

8) **ಶ್ರೀ ಬಿ. ಹರ್ಷವರ್ಧನ್ ಅವರು** – ರಾಜ್ಯದಲ್ಲಿನ ಸರ್ಕಾರಿ ಕಚೇರಿಗಳಲ್ಲಿ ಹಾಗೂ ಸಾರಿಗೆ ಇಲಾಖೆಗಳಲ್ಲಿ ಬಳಕೆಯಾಗದ ಹಾಗೂ ಹಳೆಯದಾದ ನಾಲ್ಕು ಚಕ್ರದ ವಾಹನ ಮತ್ತು ಬಸ್ಸುಗಳನ್ನು ಪರಿಶೀಲಿಸಿ, ಸ್ಕ್ರ್ಯಾಪ್ ಮಾಡುವ ಮೂಲಕ ಸರ್ಕಾರದ ಬೊಕ್ಕಸಕ್ಕೆ ಆದಾಯ ಬರುವಂತೆ ಮಾಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಸ್. ರಾಮಪ್ಪ ಅವರು** – ಹರಿಹರ ನಗರದಲ್ಲಿ ಜಿ+2 ಮನೆಗಳ ನಿರ್ಮಾಣ ಹಂತದ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

10) **ಶ್ರೀ ಜಿ. ಸೋಮಶೇಖರ ರೆಡ್ಡಿ ಅವರು** – ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮುಂಡರಗಿ ಗ್ರಾಮದಲ್ಲಿ ವಸತಿ ನಿರ್ಮಾಣ ಮಾಡಲು ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಸಿದ್ದು ಸವದಿ ಅವರು – ಬಸ್ಸುಗಳ ಸೌಲಭ್ಯ ಕುರಿತಂತೆ ದಿನಾಂಕ: 21.12.2022ರಂದು ಮೂರನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 34(639)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

.. 4/ ..

7. ವಿಶೇಷ ಚರ್ಚೆ

ರಾಜ್ಯದಲ್ಲಿ ಕಾಡುಪ್ರಾಣಿಗಳ ಹಾವಳಿ ಕುರಿತು ವಿಶೇಷ ಚರ್ಚೆ

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm